# All India Radio: Bangalore
# National Bulletin In Kannada
# 19.04.2026 19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ತಮಿಳುನಾಡು, ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆ ; ವಿವಿಧ ಪಕ್ಷಗಳಿಂದ ಬಿರುಸುಗೊಂಡ ಪ್ರಚಾರ
2. ಶ್ರೀಲಂಕಾ ಅಧ್ಯಕ್ಷರೊಂದಿಗೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಮಾತುಕತೆ
3. ಇರಾನ್ ಜೊತೆ ಮಾತುಕತೆ ನಡೆಸಲು ಇಸ್ಲಾಮಾಬಾದ್‌ಗೆ ಅಮೆರಿಕದ ಪ್ರತಿನಿಧಿಗಳು - ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಾಹಿತಿ
4. ತಮಿಳುನಾಡಿನ ಪಟಾಕಿ ಕಾರ್ಖಾನೆಯಲ್ಲಿ ಸ್ಫೋಟ ; ೧೧ ಕಾರ್ಮಿಕರು ಸಾವು
5. ಐಪಿಎಲ್ ಟಿ-೨೦ ಕ್ರಿಕೆಟ್ ; ರಾಜಸ್ಥಾನ ರಾಯಲ್ಸ್ ವಿರುದ್ಧ ಕೊಲ್ಕತ್ತಾ ನೈಟ್ ರೈಡರ್ಸ್ ತಂಡಕ್ಕೆ ರೋಚಕ ಗೆಲುವು

<><><><>

ಪಶ್ಚಿಮ ಬಂಗಾಳದಲ್ಲಿ ವಿಧಾನಸಭಾ ಚುನಾವಣೆ ಪ್ರಚಾರ ತೀವ್ರಗೊಂಡಿದ್ದು, ವಿವಿಧ ರಾಜಕೀಯ ಪಕ್ಷಗಳ ಹಿರಿಯ ನಾಯಕರು ಸರಣಿ ರ್‍ಯಾಲಿಗಳು ಮತ್ತು ರೋಡ್ ಶೋಗಳನ್ನು ನಡೆಸಿದರು. ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಇಂದು ಜಾರ್ಗ್ರಾಮ್, ಪುರುಲಿಯಾ ಮತ್ತು ಬಿಷ್ಣುಪುರ ಜಿಲ್ಲೆಗಳಲ್ಲಿ ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಿದರು. ಮುಂದಿನ ದಿನಗಳಲ್ಲಿ ಪಶ್ಚಿಮ ಬಂಗಾಳದಲ್ಲಿ ಡಬಲ್ ಎಂಜಿನ್ ಬಿಜೆಪಿ ಸರ್ಕಾರವು ರಾಜ್ಯದ ಮಹಿಳೆಯರಿಗೆ ಡಬಲ್ ಪ್ರಯೋಜನಗಳನ್ನು ನೀಡುತ್ತದೆ. ಮಹಿಳೆಯರ ಸುರಕ್ಷತೆ, ಘನತೆ ಮತ್ತು ಸಮೃದ್ಧಿಯು ತಮ್ಮ ಪಕ್ಷದ ಪ್ರಮುಖ ಆದ್ಯತೆಗಳಾಗಿವೆ ಎಂದು ಹೇಳಿದರು. ಕಾಂಗ್ರೆಸ್ ಜೊತೆ ಶಾಮೀಲಾಗಿ ತೃಣಮೂಲ ಕಾಂಗ್ರೆಸ್, ಶಾಸಕಾಂಗ ಸಂಸ್ಥೆಗಳಲ್ಲಿ ಹೆಚ್ಚಿನ ಮಹಿಳೆಯರ ಪ್ರವೇಶವನ್ನು ತಡೆಯುತ್ತಿದೆ ಎಂದು ಅವರು ದೂರಿದರು. ಮಮತಾ ಬ್ಯಾನರ್ಜಿ ನೇತೃತ್ವದ ಪಶ್ಚಿಮ ಬಂಗಾಳ ಸರ್ಕಾರವು ಸ್ಥಳೀಯ ಜನಸಂಖ್ಯೆಗಿಂತ ನುಸುಳುಕೋರರಿಗೆ ಅನುಕೂಲಕರವಾದ ರಾಜಕೀಯವನ್ನು ಅನುಸರಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಆರೋಪಿಸಿದರು. ಬಿಜೆಪಿ ನಾಯಕ ಮತ್ತು ಕೇಂದ್ರ ಸಚಿವ ಜೆ.ಪಿ.ನಡ್ಡಾ ಜಲ್ಪೈಗುರಿ ಜಿಲ್ಲೆಯಲ್ಲಿ ರೋಡ್ ಶೋ ನಡೆಸಿದರು. ತೃಣಮೂಲ ಕಾಂಗ್ರೆಸ್ ಮುಖ್ಯಸ್ಥೆ ಮತ್ತು ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಹೂಗ್ಲಿ ಮತ್ತು ಪುರ್ಬಾ ಬರ್ಧಮಾನ್ ಜಿಲ್ಲೆಗಳಲ್ಲಿ ಪಕ್ಷದ ಅಭ್ಯರ್ಥಿಗಳ ಪರ ಮತಯಾಚಿಸಿದರು. ಈ ವೇಳೆ ಮಾತನಾಡಿದ ಅವರು, ಬಿಜೆಪಿ ಜನರನ್ನು ದಾರಿ ತಪ್ಪಿಸುತ್ತಿದೆ ಎಂದು ಆರೋಪಿಸಿದರು. ಬಿಜೆಪಿ ನಾಯಕ ಮತ್ತು ತ್ರಿಪುರ ಮುಖ್ಯಮಂತ್ರಿ ಮಾಣಿಕ್ ಸಹಾ, ಮುರ್ಷಿದಾಬಾದ್ ಜಿಲ್ಲೆಯ ಜಿಯಾಗಂಜ್ ಮತ್ತು ಕಂಡಿಯಲ್ಲಿ ರೋಡ್ ಶೋಗಳಲ್ಲಿ ಭಾಗವಹಿಸಿದ್ದರು. ಇದೇ ವೇಳೆ ಕಾಂಗ್ರೆಸ್ ಮತ್ತು ಎಡ ಪಕ್ಷಗಳು ಸಹ ತಮ್ಮ ಅಭಿಯಾನವನ್ನು ತೀವ್ರಗೊಳಿಸಿವೆ.

<><><><>

ಬಿಜೆಪಿ ಹಿರಿಯ ನಾಯಕ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ತಮಿಳುನಾಡಿನ ಈರೋಡ್ ಜಿಲ್ಲೆಯ ಶಿವಗಿರಿ ಮತ್ತು ಮೊಡಕುರಿಚಿಯಲ್ಲಿ ಪ್ರಚಾರ ನಡೆಸಿದರು. ಸಾರ್ವಜನಿಕ ಸಭೆಗಳನ್ನುದ್ದೇಶಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಎಐಎಡಿಎಂಕೆ ಪ್ರಧಾನ ಕಾರ್ಯದರ್ಶಿ ಎಡಪ್ಪಾಡಿ ಕೆ.ಪಳನಿಸ್ವಾಮಿ ನೇತೃತ್ವದ ಎನ್‌ಡಿಎ ಬಲವಾದ ಮತ್ತು ಯಶಸ್ವಿ ಮೈತ್ರಿಕೂಟವಾಗಿದೆ. ಡಿಎಂಕೆ ಸರ್ಕಾರ ನಿಷ್ಕ್ರಿಯವಾಗಿದೆ ಮತ್ತು ಸಾರ್ವಜನಿಕ ಕಲ್ಯಾಣವನ್ನು ನಿರ್ಲಕ್ಷಿಸಿದೆ ಎಂದು ಟೀಕಿಸಿದರು. ನಾಮಕ್ಕಲ್‌ನಲ್ಲಿ ಪ್ರಚಾರ ನಡೆಸಿದ ಎಐಎಡಿಎಂಕೆ ಪ್ರಧಾನ ಕಾರ್ಯದರ್ಶಿ ಎಡಪ್ಪಾಡಿ ಕೆ.ಪಳನಿಸ್ವಾಮಿ, ತಮ್ಮ ಪಕ್ಷ ಅಧಿಕಾರಕ್ಕೆ ಬಂದರೆ ರೈತರಿಗೆ ೧ ಸಾವಿರದ ೪೦೦ ಯೂನಿಟ್ ಉಚಿತ

ವಿದ್ಯುತ್ ನೀಡಲಿದೆ ಎಂದು ಭರವಸೆ ನೀಡಿದರು. ಹಿಂದಿನ ಎಐಎಡಿಎಂಕೆ ಸರ್ಕಾರದ ಅವಧಿಯಲ್ಲಿ ಪರಿಚಯಿಸಲಾದ ಹಲವಾರು ಕಲ್ಯಾಣ ಯೋಜನೆಗಳನ್ನು ಡಿಎಂಕೆ ಸ್ಥಗಿತಗೊಳಿಸಿದೆ ಎಂದು ಅವರು ಆರೋಪಿಸಿದರು. ಟಿವಿಕೆ ನಾಯಕರು ತಮ್ಮ ಚುನಾವಣಾ ಪ್ರಚಾರದ ಭಾಗವಾಗಿ ತಿರುಚ್ಚಿ ಪೂರ್ವದಲ್ಲಿ ರೋಡ್ ಶೋ ನಡೆಸಿದರು.

<><><><>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸಾನಾಯಕೆ ಅವರನ್ನು ಭೇಟಿ ಮಾಡಿದರು. ಇತಿಹಾಸ ಮತ್ತು ಸಾಂಸ್ಕೃತಿಕ ಮೌಲ್ಯಗಳಲ್ಲಿ ಬೇರೂರಿರುವ ಬಹುಮುಖ ಭಾರತ-ಶ್ರೀಲಂಕಾ ಸಂಬಂಧಗಳನ್ನು ಮತ್ತಷ್ಟು ಗಟ್ಟಿಗೊಳಿಸುವ ಕುರಿತು ಇಬ್ಬರೂ ನಾಯಕರು ಚರ್ಚೆ ನಡೆಸಿದರು. 'ನೆರೆ-ಹೊರೆ ಮೊದಲು" ನೀತಿಗೆ ಭಾರತದ ಬದ್ಧತೆಯನ್ನು ಮತ್ತು ಎರಡೂ ರಾಷ್ಟ್ರಗಳ ನಡುವೆ ದ್ವಿಪಕ್ಷೀಯ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಬಗ್ಗೆಯೂ ಸಿ.ಪಿ.ರಾಧಾಕೃಷ್ಣನ್ ಪುನರುಚ್ಚರಿಸಿದರು. ಶ್ರೀಲಂಕಾದಲ್ಲಿ ದಿಟ್ವಾ ಚಂಡಮಾರುತದಿಂದ ಹಾನಿಗೊಳಗಾದ ಪ್ರದೇಶಗಳಿಗೆ ಭಾರತೀಯ ವಸತಿ ಯೋಜನೆ ಮತ್ತು ೪೫೦ ದಶಲಕ್ಷ ಡಾಲರ್ ಪ್ಯಾಕೇಜ್ ಅಡಿಯಲ್ಲಿ ಜಾರಿಗೆ ತರಲಾಗುತ್ತಿರುವ ಯೋಜನೆಗಳು ಸೇರಿದಂತೆ ವಿವಿಧ ಉಪಕ್ರಮಗಳ ಬಗ್ಗೆಯೂ ಚರ್ಚೆಗಳು ನಡೆಯಿತು.

<><><><>

ಮಹಿಳಾ ಮೀಸಲಾತಿ ಮಸೂದೆಗೆ ಸಂಬಂಧಿಸಿದಂತೆ ಕಾಂಗ್ರೆಸ್, ದೇಶಾದ್ಯಂತ ಮಹಿಳೆಯರನ್ನು ವಂಚಿಸಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಲ್ಹಾದ್ ಜೋಶಿ ಆರೋಪಿಸಿದ್ದಾರೆ. ತಿರುವನಂತಪುರಂನಲ್ಲಿಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಕ್ಷೇತ್ರ ಪುನರ್ವಿಂಗಡಣೆಯ ಸಮಯದಲ್ಲಿ ದಕ್ಷಿಣ ಭಾರತದ ರಾಜ್ಯಗಳ ಸ್ಥಾನ ಪ್ರಾತಿನಿಧ್ಯ ಕಡಿಮೆಯಾಗುತ್ತದೆ ಎಂದು ಕಾಂಗ್ರೆಸ್ ಪಕ್ಷ ಸುಳ್ಳು ಪ್ರಚಾರ ಮಾಡುತ್ತಿದೆ. ಸ್ಥಾನಗಳ ಸಂಖ್ಯೆಯಲ್ಲಿ ಯಾವುದೇ ಕಡಿತವಾಗುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು. ಪುನರ್‌ವಿಂಗಡಣೆ ಪ್ರಕ್ರಿಯೆಯ ಬಗ್ಗೆ ನಿಖರವಾದ ಮಾಹಿತಿ ನೀಡಿದ್ದರೂ, ಮಹಿಳಾ ಮೀಸಲಾತಿ ಅನುಷ್ಠಾನವನ್ನು ತಡೆಯುವ ಸಲುವಾಗಿ ವಿರೋಧ ಪಕ್ಷವು ಮಸೂದೆಯನ್ನು ವಿರೋಧಿಸಿತು. ಕಾಂಗ್ರೆಸ್, ಹಿಂದೆಯೂ ಸಹ ಮಹಿಳಾ ಮೀಸಲಾತಿಯನ್ನು ವಿರೋಧಿಸಿತ್ತು ಎಂದು ಅವರು ದೂರಿದರು. ಯುಪಿಎ ಸರ್ಕಾರದ ಅವಧಿಯಲ್ಲಿ ೨೦೧೦ ರಲ್ಲಿ ಸಂಸತ್ತಿನಲ್ಲಿ ಮಹಿಳಾ ಮೀಸಲಾತಿ ಮಸೂದೆಯನ್ನು ಪರಿಚಯಿಸಿದಾಗ, ಬಿಜೆಪಿ ಮಸೂದೆಯನ್ನು ಸಂಪೂರ್ಣವಾಗಿ ಬೆಂಬಲಿಸಿತ್ತು. ಆದಾಗ್ಯೂ, ಮಿತ್ರ ಪಕ್ಷಗಳ ವಿರೋಧದಿಂದಾಗಿ, ಕಾಂಗ್ರೆಸ್ ಅದರೊಂದಿಗೆ ಮುಂದುವರಿಯಲು ಸಿದ್ಧವಿರಲಿಲ್ಲ. ಆದರೆ, ಈಗ ಕಾಂಗ್ರೆಸ್, ಸುಳ್ಳು ಮಾಹಿತಿಯೊಂದಿಗೆ ದೇಶದ ಜನರನ್ನು ದಾರಿ ತಪ್ಪಿಸಲು ಪ್ರಯತ್ನಿಸುತ್ತಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಆರೋಪಿಸಿದರು.

<><><><>

ಇರಾನ್ ಜೊತೆ ಮಾತುಕತೆ ನಡೆಸಲು ಅಮೆರಿಕದ ಪ್ರತಿನಿಧಿಗಳು ಪಾಕಿಸ್ತಾನದ ಇಸ್ಲಾಮಾಬಾದ್‌ಗೆ ಪ್ರಯಾಣಿಸುತ್ತಿದ್ದಾರೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಹಾರ್ಮುಜ್ ಜಲಸಂಧಿಯಲ್ಲಿ ಇರಾನ್, ಕದನ ವಿರಾಮ ಒಪ್ಪಂದವನ್ನು ಉಲ್ಲಂಘಿಸಿದೆ ಎಂದು ಇದೇ ವೇಳೆ ಅವರು ಆರೋಪಿಸಿದ್ದಾರೆ. ನಿಯೋಗಗಳು ನಾಳೆ ಇಸ್ಲಾಮಾಬಾದ್‌ಗೆ ಆಗಮಿಸಲಿವೆ ಎಂದು ಅವರು ಹೇಳಿದರು. ಆದರೆ, ಇರಾನ್ ಇನ್ನೂ ಮಾತುಕತೆಗಳನ್ನು ದೃಢಪಡಿಸಿಲ್ಲ. ನ್ಯಾಯಯುತ ಮತ್ತು ಸಮಂಜಸವಾದ ಒಪ್ಪಂದವನ್ನು ಅಮೆರಿಕ ನೀಡುತ್ತಿದೆ. ಇರಾನ್ ಅದನ್ನು ಒಪ್ಪಿಕೊಳ್ಳುತ್ತದೆ ಎಂಬ ಭರವಸೆ ಇದೆ. ಮಾತುಕತೆ ವಿಫಲವಾದರೆ, ಇರಾನ್‌ನ ವಿದ್ಯುತ್ ಸ್ಥಾವರಗಳು ಮತ್ತು ಸೇತುವೆಗಳನ್ನು ಗುರಿಯಾಗಿಸಿ, ಅಮೆರಿಕ ದಾಳಿ ನಡೆಸಬಹುದು ಎಂದು ಡೊನಾಲ್ಡ್ ಟ್ರಂಪ್ ಎಚ್ಚರಿಸಿದರು.

<><><><>

ಒಡಿಶಾದ ಭುವನೇಶ್ವರದಲ್ಲಿ ನಡೆದ ಗ್ರ್ಯಾಂಡ್ ಫಿನಾಲೆಯಲ್ಲಿ ಗೋವಾದ ಸಾಧ್ವಿ ಸೈಲ್, 'ಫೆಮಿನಾ ಮಿಸ್ ಇಂಡಿಯಾ ವರ್ಲ್ಡ್ ೨೦೨೬'ರ ಕಿರೀಟವನ್ನು ಮುಡಿಗೇರಿಸಿಕೊಂಡಿದ್ದಾರೆ. ಭುವನೇಶ್ವರದ ಕಳಿಂಗ ಇನ್ಸ್ಟಿಟ್ಯೂಟ್ ಆಫ್ ಇಂಡಸ್ಟ್ರಿಯಲ್ ಟೆಕ್ನಾಲಜಿಯಲ್ಲಿ ನಡೆದ ಸ್ಪರ್ಧೆಯಲ್ಲಿ ದೇಶಾದ್ಯಂತ ಹಲವು ಸ್ಪರ್ಧಿಗಳು ಭಾಗವಹಿಸಿದ್ದರು. ಇನ್ನೊಂದೆಡೆ, ಕೇಂದ್ರ ಜವಳಿ ಸಚಿವಾಲಯವು 'ವಿಶ್ವ ಸೂತ್ರ - ವೀವ್ಸ್ ಆಫ್ ಇಂಡಿಯಾ ಫಾರ್ ದಿ ವರ್ಲ್ಡ್' ಎಂಬ ಉಪಕ್ರಮವನ್ನು ಪ್ರಾರಂಭಿಸಿದೆ. ಈ ಉಪಕ್ರಮವನ್ನು ಆಧರಿಸಿದ ವಿನ್ಯಾಸಕರ ಸಂಗ್ರಹವನ್ನು ಸಮಾರಂಭದಲ್ಲಿ ಪ್ರಸ್ತುತಪಡಿಸಲಾಯಿತು.

<><><><>

ತಮಿಳುನಾಡಿನ ವಿರುಧುನಗರ ಜಿಲ್ಲೆಯ ವಿ.ಮುತ್ತುಲಿಂಗಪುರಂನಲ್ಲಿರುವ ಪಟಾಕಿ ಕಾರ್ಖಾನೆಯಲ್ಲಿ ಇಂದು ಮಧ್ಯಾಹ್ನ ಸಂಭವಿಸಿದ ಸ್ಫೋಟದಲ್ಲಿ ೧೦ ಕಾರ್ಮಿಕರು ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ ಆರು ಜನರು ಗಂಭೀರವಾಗಿ ಗಾಯಗೊಂಡಿದ್ದು, ತುರ್ತು ಚಿಕಿತ್ಸೆಗಾಗಿ ಸಮೀಪದ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ. ಕಾರ್ಮಿಕರು ಕಾರ್ಖಾನೆಯೊಳಗೆ ರಾಸಾಯನಿಕ ವಸ್ತುಗಳನ್ನು ಸ್ಥಳಾಂತರಿಸುತ್ತಿದ್ದಾಗ ಈ ಘಟನೆ ಸಂಭವಿಸಿದೆ. ಸ್ಫೋಟದ ಸಮಯದಲ್ಲಿ ಒಟ್ಟು ೩೦ ಕಾರ್ಮಿಕರು ಘಟಕದಲ್ಲಿದ್ದರು. ಘಟನೆಯಲ್ಲಿ ಜೀವಹಾನಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಮತ್ತು ಪ್ರಧಾನಿ ನರೇಂದ್ರ ಮೋದಿ ದುಃಖ ವ್ಯಕ್ತಪಡಿಸಿದ್ದಾರೆ. ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ.

<><><><>

ಕೊಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದ ದಿನದ ಮೊದಲ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ವಿರುದ್ಧ  ಕೊಲ್ಕತ್ತಾ ನೈಟ್ ರೈಡರ್ಸ್ ೪ ವಿಕೆಟ್‌ಗಳಿಂದ ರೋಚಕ ಗೆಲುವು ದಾಖಲಿಸಿದೆ. ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ್ ರಾಯಲ್ಸ್, ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೫೫ ರನ್ ಗಳಿಸಿತು. ಗೆಲುವಿನ ಗುರಿ ಬೆನ್ನತ್ತಿದ ಕೊಲ್ಕತ್ತಾ ನೈಟ್ ರೈಡರ್ಸ್ ೧೯.೪ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೬೧ ರನ್ ಗಳಿಸುವ ಮೂಲಕ ಗೆಲುವಿನ ನಗೆ ಬೀರಿತು. ಚಂಡೀಗಢದ ಮಹಾರಾಜ ಯದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ದಿನದ ಮತ್ತೊಂದು ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಮತ್ತು ಲಕ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಲಖನೌ ಸೂಪರ್ ಜೈಂಟ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<><><><>

ದಕ್ಷಿಣ ಆಫ್ರಿಕಾದ ಡರ್ಬನ್‌ನಲ್ಲಿ ನಡೆಯುತ್ತಿರುವ ಎರಡನೇ ಮಹಿಳಾ ಟಿ-೨೦ ಪಂದ್ಯದಲ್ಲಿ ಭಾರತ ಮತ್ತು ದಕ್ಷಿಣ ಆಫ್ರಿಕಾ ವನಿತಾ ತಂಡಗಳು ಮುಖಾಮುಖಿಯಾಗಿವೆ. ಮೊದಲು ಬ್ಯಾಟಿಂಗ್ ಮಾಡಿದ ಭಾರತ ಮಹಿಳಾ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೪೬ ರನ್ ಮಾಡಿದೆ. ಗೆಲುವಿನ ಗುರಿ ಬೆನ್ನತ್ತಿರುವ ದಕ್ಷಿಣ ಆಫ್ರಿಕಾ, ಇತ್ತೀಚಿನ ವರದಿಯಂತೆ, ೫.೪ ಓವರ್‌ಗಳಲ್ಲಿ ಯಾವುದೇ ವಿಕೆಟ್ ನಷ್ಟವಿಲ್ಲದೇ ೬೪ ರನ್ ಮಾಡಿ ಆಡುತ್ತಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>